437 ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ): ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನಲ್ಲಿ ಸಕ್ಕರೆ ಕಾರ್ಖಾನೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಸಕ್ಕರೆ ಕಾರ್ಖಾನೆ ಪ್ರಾರಂಭಿಸುವುದರಿಂದ ಸ್ಥಳೀಯ ಕಬ್ಬು ಬೆಳೆಗಾರರಿಗೆ ಅನುಕೂಲವಾಗುವುದು ನಿಜವೇ;

ಇ) ಹಾಗಿದ್ದಲ್ಲಿ, ಯಾವಾಗಿನಿಂದ ಪ್ರಾರಂಭಿಸಲಾಗುವುದು;

ಈ) ಇದರಿಂದ ಸ್ಥಳೀಯರಿಗೆ ಉದ್ಯೋಗ ಸೃಷ್ಟಿಯಾಗಿ ಅನುಕೂಲವಾಗುವುದಿಲ್ಲವೇ?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಹಳಿಯಾಳ ತಾಲ್ಲೂಕಿನ ಹುಲ್ಲಟ್ಟಿ ಎಂಬಲ್ಲಿ ಜಿ.ಎಂ.ಆರ್. ಇಂಡಸ್ಟ್ರೀಸ್‌ರವರಿಂದ 3500 ಟಿ.ಸಿ.ಡಿ. ಸಾಮರ್ಥ್ಯದ ಸಕ್ಕರೆ ಕಾರ್ಖಾನೆ ಸ್ಥಾಪನೆಯಾಗಿದ್ದು, 2008–09ನೇ ಸಾಲಿನಲ್ಲಿ ಕಬ್ಬು ನುರಿಸುವ ಕಾರ್ಯ ಪ್ರಾರಂಭ ಮಾಡಿದೆ.

ಆ) ಈಗಾಗಲೇ ಸಕ್ಕರೆ ಕಾರ್ಖಾನೆ ಕಾರ್ಯಾರಂಭಗೊಂಡಿರುವುದರಿಂದ ಕಬ್ಬು ಬೆಳೆಗಾರರಿಗೆ ಅನುಕೂಲವಾಗಿದೆ.

ಇ) 2008–09ನೇ ಸಾಲಿನಿಂದ ಕಾರ್ಖಾನೆ ಕಬ್ಬು ನುರಿಸುವ ಕಾರ್ಯ ಪ್ರಾರಂಭ ಮಾಡಿದೆ.

ಈ) ಸಕ್ಕರೆ ಕಾರ್ಖಾನೆ ಸ್ಥಾಪನೆಯಿಂದಾಗಿ ಸ್ಥಳೀಯರಿಗೆ ಉದ್ಯೋಗ ದೊರಕಿದೆ ಹಾಗೂ ಕಬ್ಬು ಬೆಳೆಗಾರರಿಗೆ ಅನುಕೂಲವಾಗಿದೆ.